


# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ


**ಏಸು ಪ್ರಕಾಶ**

ಹೊಸನಗರ ನುಡಿ ನಮನ: ಪರಿಸರ, ಕಲೆ, ಶಿಕ್ಷಣ ಹೀಗೆ ಸಾಮಾಜಿಕ ಕಳಕಳಿಯಲ್ಲಿ ಪೂರ್ಣವಾಗಿ ತೊಡಗಿಕೊಂಡರೂ ಕುಟುಂಬದ ಜವಾಬ್ದಾರಿಯನ್ನು ಮರೆಯದೇ ಮಾದರಿ ಕುಟುಂಬಕ್ಕೊಂದು ಉದಾಹರಣೆಯಾಗಿ ಬದುಕಿದವರು ಯೇಸು ಪ್ರಕಾಶ್


ಸೋಮವಾರ,22ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-61 | ● ಉಚಿತ | ● | ● www.suddisanchaari.in




**Top News** ಆನವಟ್ಟಿ ಕಾಂಗ್ರೆಸ್ ಕಚೇರಿ ಹಾಗೂ ಗ್ಯಾರಂಟಿ ಕಾರ್ಡ್ ಉದ್ಘಾಟಿಸಿ ಸಚಿವ ಮಧು ಬಂಗಾರಪ್ಪ ವಿಶ್ವಾಸ

## 'ಗೀತಾ ಶಿವರಾಜ್‌ಕುಮಾರ್ ಹೆಸರು, ಹೆಚ್ಚು ಮತಗಳ ಪಡೆದು ಗೆದ್ದವರ ಪಟ್ಟಿಯಲ್ಲಿ ಇರಲಿದೆ'

ಸುದ್ದಿ-ಸಂಚಾರಿ

ಆನವಟ್ಟಿ:ಕಳೆದ ವಿಧಾನಸಭೆ ಚುಣಾವಣೆಯಲ್ಲಿ ಕಾಂಗ್ರೆಸ್ ನೀಡಿದ್ದ ಗ್ಯಾರಂಟಿಗಳನ್ನು ಈಡೇರಿಸಿದ್ದು, ಈಗ ಪಕ್ಷದ ಲೋಕಸಭಾ ಚುಣಾವಣೆಯಲ್ಲಿ ಗ್ಯಾರಂಟಿ ಕಾರ್ಡ್ ತಯಾರಿಸಲು ಕರ್ನಾಟಕ ಮಾದರಿಯಾಗಿದೆ. ಆಗ ಪ್ರನಾಳಿಕೆ ಅಧ್ಯಕ್ಷ ಜಿ. ಪರಮೇಶ್ವರಪ್ಪ ಹಾಗೂ ನಾನು ಉಪಾಧ್ಯಕ್ಷನಾಗಿದ್ದು, ಬಡವರಿಗೆ ಯೋಜನೆ ರೂಪಿಸುವಲ್ಲಿ ನನ್ನದು ಪಾಲು ಇದೆ ಎಂದು ಸಚಿವ ಎಸ್. ಮಧು ಬಂಗಾರಪ್ಪ ಸ್ಮರಿಸಿದರು.

ಶನಿವಾರ ಆನವಟ್ಟಿಯಲ್ಲಿ ಕಾಂಗ್ರೆಸ್ ಪಕ್ಷದ ಕಚೇರಿ ಹಾಗೂ ಗ್ಯಾರಂಟಿ ಕಾರ್ಡ್ ಉದ್ಘಾಟನೆ ಮತ್ತು ಗ್ಯಾರಂಟಿ ಹಬ್ಬ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ಪ್ರನಾಳಿಕೆ ಸಿದ್ದಪಡಿಸಿದ್ದಾಗ ಗ್ಯಾರಂಟಿ ಯೋಜನೆಗಳಿಗೆ 36 ಸಾವಿರ ಕೋಟಿ ಹಣವನ್ನು ಅಂದಾಜಿಸಲಾಗಿತ್ತು. ಅನುಷ್ಠಾನಕ್ಕೆ ತಂದಾಗ 57 ಸಾವಿರ ಕೋಟಿ ತಲುಪಿದೆ. ಹಾಗಾಗಿ ಅಭಿವೃಧಿ ಕೆಲಸಗಳಿಗೆ ಹಣ ಕಡಿಮೆಯಾಗಿದೆ. ಇಂತಹ ಕಷ್ಟದ ಸಮಯದಲ್ಲೂ ಶಿಕ್ಷಣ ಕ್ಷೇತ್ರಕ್ಕೆ 44 ಸಾವಿರ ಕೋಟಿ ಹಣವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ನೀಡಿದ್ದಾರೆ ಎಂದರು.

ಚುನಾವಣೆ ಬಳಿಕ ರಾಜ್ಯದಲ್ಲಿ ಅಭಿವೃಧಿ ಕೆಲಸಗಳಿಗೆ ಹೆಚ್ಚಿನ ಅಧ್ಯತೆ ನೀಡಲಾಗುವುದು. ಹಿಂದೆ ಶಾಸಕನಾಗಿ ಮಾಡಿದ ರಸ್ತೆಗಳು, ಇನ್ನೂ ಚನ್ನಾಗಿವೆ. ಈಚೆಗೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಾಡಿರುವ ರಸ್ತೆಗಳು ಕಿತ್ತುಹೋಗುತ್ತಿವೆ ಎಂದರು.

ಹತ್ತು ವರ್ಷದಿಂದ ನರೇಂದ್ರ ಮೋದಿ ಸುಳ್ಳು ಹೇಳಿ ಜನರ ದಿಕ್ಕು ತಪ್ಪಿಸಿ ಅಡಳಿತ ನೆಡೆಸಿದ್ದಾರೆ. ಈಗಲ್ಲೂ ಅದೇ ಸುಳ್ಳಿನ ಕಂತೆಗಳನ್ನು ಮುಂದುವರಸಿ, ದೇಶದ ಜನರ ಹಾದಿ ತಪ್ಪಿಸುವ ಪ್ರಯತ್ನ ನಡೆಸಿದ್ದಾರೆ. ಆದರೆ ಈ ಚುನಾವಣೆಯಲ್ಲಿ ಮೋದಿ ಅವರ ಸುಳ್ಳಿನ ಜಪ ನಡೆಯುವುದಿಲ್ಲ. ನುಡಿದಂತೆ ನಡೆಯುವ ಕಾಂಗ್ರೆಸ್ ಪಕ್ಷದ ಕೈ ಹಿಡಿಯುತ್ತಾರೆ ಮತದಾರರು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಕಾಂಗ್ರೆಸ್ ಪರವಾದ ವಾತವರಣವಿದ್ದು, ಕಾರ್ಯಕರ್ತರು ಪಕ್ಷದ ಹಾಗೂ ಅಭ್ಯರ್ಥಿಯ ಗೆಲುವಿಗಾಗಿ ಶ್ರಮವಹಿಸಿ ದುಡಿಯುತ್ತಿದ್ದಾರೆ. ಕ್ಷೇತ್ರ ಎಲ್ಲಾ ತಾಲ್ಲೂಕಿನಲ್ಲೂ ಗೀತಾಕ್ಕನಿಗೆ ಉತ್ತಮ ಬೆಂಬಲ ವ್ಯಕ್ತವಾಗಿದೆ. ಸೊರಬದಲ್ಲಿ ನನಗೆ 45 ಸಾವಿರ ಮತಗಳ ಲೀಡ್ ನೀಡಿದ್ದರು. ಗೀತಾ ಶಿವಕುಮಾರ್ ಅವರು ಸಹ ಅತೀ ಹೆಚ್ಚು ಮತ ಪಡೆಯುವ ಮೂಲಕ ಜಯಗಳಿಸುತ್ತಾರೆ ಮತ್ತು ಹೆಚ್ಚು ಮತ ಪಡೆದು ಗೆದ್ದವರ ಪಟ್ಟಿಯಲ್ಲಿ ಅವರ ಹೆಸರು ಇರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಹಾಲಕ್ಷ್ಮೀ , ಪ್ರತಿ ವರ್ಷ ಪ್ರತಿ ಬಡ ಕುಟುಂಬದ ಒಬ್ಬ ಮಹಿಳೆ ಒಂದು ಲಕ್ಷ, ಯುವ ಬೆಳಕು , ಪ್ರತಿ ವರ್ಷ ನಿರುದ್ಯೋಗ ಯುವಕನಿಗೆ ಒಂದು ಲಕ್ಷ, ಶಾಶ್ವತ ಆಯೋಗ ರಚನೆ ಮಾಡುವ ಮೂಲಕ ರೈತರ ಕೃಷಿ ಸಾಲ ಮನ್ನಾ, ರಾಷ್ಟ್ರೀಯ ಕನಿಷ್ಠ ವೇತನ ದಿನಕ್ಕೆ 400 ರೂಪಾಯಿಗೆ ಹೆಚ್ಚಳ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆಗಾಗಿ ಪಾಲುದಾರಿಕೆಯ ನ್ಯಾಯ ನೀಡುವ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್‌ಗಳನ್ನು ಮನೆ-ಮನೆ ವಿತರಿಸುವ ಜೊತೆಗೆ ಪಕ್ಷ ನೀಡಿರುವ ಜನಪರ ಯೋಜನೆಗಳ ಕುರಿತು ಮತದಾರರಿಗೆ ಮನವರಿಕೆ ಮಾಡಿಕೊಡಬೇಕೆಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಆನವಟ್ಟಿ ಬ್ಲಾಕ್ ಅಧ್ಯಕ್ಷ ಸದಾನಂದಗೌಡ ಬಿ. ಪಾಟೀಲ್ ಬಿಳಗಲಿ, ಮುಖಂಡರಾದ ಅಣ್ಣಪ್ಪ, ಕೆ.ಪಿ ರುದ್ರಗೌಡ, ಎಚ್. ಗಣಪತಿ, ಕೆ.ವಿ ಗೌಡ, ಢಾಕಪ್ಪ, ಆರ್.ಸಿ ಪಾಟೀಲ್, ಚೌಟಿ ಚಂದ್ರಶೇಖರ್ ಪಾಟೀಲ್, ಪಿ.ಎಸ್ ಮಂಜುನಾಥ, ಈರಪ್ಪ ಜಡೆ, ಎಲ್.ಜಿ ಮಾಲತೇಶ್, ದೇವರಾಜ್ ತ್ಯಾವರೆ ತೆಪ್ಪ, ಸುರೇಶ್ ಹಾವಣ್ಣನವರ್, ಚಾಂದ್ ನೂರಿ, ಫೈರೋಜ್ ಇದ್ದರು.






**Top News** ಒಟ್ಟು 27 ಅಭ್ಯರ್ಥಿಗಳಿಂದ 38 ನಾಮಪತ್ರಗಳು ಸಲ್ಲಿಕೆ

## ಪರಿಶೀಲನೆ ವೇಳೆ ಆಮ್ ಆದ್ಮಿ ಪಕ್ಷದ ಅಭ್ಯರ್ಥಿಯ ನಾಮಪತ್ರ ತಿರಸ್ಕೃತ

ಸುದ್ದಿ ಸಂಚಾರಿ

ಶಿವಮೊಗ್ಗ: ಶಿವಮೊಗ್ಗ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಏ.20 ರಂದು ನಾಮಪತ್ರಗಳ ಪರಿಶೀಲನೆ ನಡೆದಿದೆ. ಒಬ್ಬ ಅಭ್ಯರ್ಥಿಯ ನಾಮಪತ್ರ ತಿರಸ್ಕೃತಗೊಂಡಿದೆ. ಏ.12 ರಿಂದ 19ರವರೆಗೆ ಒಟ್ಟು 27 ಅಭ್ಯರ್ಥಿಗಳಿಂದ 38 ನಾಮಪತ್ರಗಳು ಸಲ್ಲಿಕೆಯಾಗಿವೆ. ಶನಿವಾರ ನಡೆದ ನಾಮಪತ್ರಗಳ ಪರಿಶೀಲನೆ ವೇಳೆ ಆಮ್ ಆದ್ಮಿ ಪಕ್ಷದ ಸುಭಾನ್ ಖಾನ್ ಸಲ್ಲಿಸಿದ ನಾಮಪತ್ರ ತಿರಸ್ಕೃತಗೊಂಡಿದೆ. ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದ ಎಚ್.ಸಿ.ಚಂದ್ರಶೇಖರ್ ಮತ್ತು ಬಹುಜನ ಮುಕ್ತಿ ಪಾರ್ಟಿಯ ಜಿ.ಜಯದೇವ ಅವರ ನಾಮಪತ್ರಗಳನ್ನು ಮಾನ್ಯ ಮಾಡಿದ್ದು ಪಕ್ಷೇತರ ಅಭ್ಯರ್ಥಿಗಳೆಂದು ಪರಿಗಣಿಸಲಾಗಿದೆ. ನಾಮಪತ್ರಗಳ ಪರಿಶೀಲನೆ ನಂತರ 26 ಅಭ್ಯರ್ಥಿಗಳ ನಾಮಪತ್ರಗಳನ್ನು ಮಾನ್ಯ ಮಾಡಲಾಗಿದೆ. ಏ.22 ರಂದು ಉಮೇದುವಾರಿಕೆ ಹಿಂಪಡೆಯಲು ಕಡೆಯ ದಿನವಾಗಿದೆ.




# ಶಿಕಾರಿಪುರ : ಕುಮದ್ವತಿ ಕೇಂದ್ರಿಯ ವಸತಿ ಶಿಕ್ಷಣ ಸಂಸ್ಥೆಯಲ್ಲಿ ಪ್ರವೇಶ ಪ್ರಾರಂಭ




**ಶಿಕಾರಿಪುರ** ಶಿಕಾರಿಪುರದ ಕಾಂಗ್ರೆಸ್ ಕಚೇರಿಯಲ್ಲಿ ಶನಿವಾರ ನಡೆದ ಗ್ಯಾರಂಟಿ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಸಚಿವ ಮಧು ಬಂಗಾರಪ್ಪ ಮಾತನಾಡಿದರು

## ಶಿಕಾರಿಪುರ: ಬಾಲಕಿ ಹತ್ಯೆ

ಸುದ್ದಿ-ಸಂಚಾರಿ | ಶಿಕಾರಿಪುರ

ಶಿಕಾರಿಪುರ: ತಾಲ್ಲೂಕಿನ ಕೊಪ್ಪದಕೆರೆ ಗ್ರಾಮದಲ್ಲಿ 9 ವರ್ಷದ ಬಾಲಕಿ ಮೃತದೇಹ ಶನಿವಾರ ದೊರೆತಿದೆ.ಬಾಲಕಿ ಶರಣ್ಯ (9) ಮೃತದೇಹ ಬಾಲಕಿ ಮನೆ ಹಿಂಭಾಗದ ಪ್ರದೇಶದಲ್ಲಿ ದೊರೆತಿದೆ.

‘ಕೊಪ್ಪದಕೆರೆ ಗ್ರಾಮದ ಗದೀಗೇಶ್ ಎಂಬುವರು ಕೊಲೆ ಮಾಡಿದ್ದಾರೆ’ ಎಂದು ಆರೋಪಿಸಿ ಬಾಲಕಿ ತಂದೆ ನಾಗರಾಜ್ ಗ್ರಾಮಾಂತರ ಠಾಣೆಯಲ್ಲಿ ದೂರು ನೀಡಿದ್ದಾರೆ. ಪೊಲೀಸರು ಭಾನುವಾರ ಮೊಕದ್ದಮೆ ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.

ಸುದ್ದಿ ಸಂಚಾರಿ

**Top News** ಸಚಿವ ಮಧು ಬಂಗಾರಪ್ಪ ಲೇವಡಿ

# ಚುನಾವಣೆ ನಂತರ ಬಿಜೆಪಿಗೆ ವಾರಂಟಿ ಇರುವುದಿಲ್ಲ

ಸುದ್ದಿ ಸಂಚಾರಿ

ಶಿಕಾರಿಪುರ: ಲೋಕಸಭೆ ಚುನಾವಣೆ ನಂತರ ಬಿಜೆಪಿಗೆ ವಾರಂಟಿ ಇರುವುದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಲೇವಡಿ ಮಾಡಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಶನಿವಾರ ನಡೆದ ಗ್ಯಾರಂಟಿ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಬಿಜೆಪಿಗೆ ಮತ ಹಾಕಿದವರ ಮನೆಗೂ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಹಣ ತಲುಪಿದೆ. ಗ್ಯಾರಂಟಿ ನಮಗೆ ವಾರಂಟಿಯಾಗಿದೆ. ಗ್ಯಾರಂಟಿ ಯೋಜನೆಯ ಹಣ ಮಹಿಳೆಯರಿಗೆ ಆರ್ಥಿಕ ಶಕ್ತಿ ಕೊಟ್ಟಿದೆ. ಬಡವರ ಮನೆಗೆ ಬೆಳಕು ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆ ಮೂಲಕ ಹಣವನ್ನು ರಾಜ್ಯದ ಜನತೆಗೆ ಪ್ರಾಮಾಣಿಕವಾಗಿ ನೀಡುತ್ತಿದ್ದಾರೆ ಎಂದರು.

ಬಡವರಿಗೆ ಸುಳ್ಳು ಭರವಸೆ ನೀಡಿ ಪ್ರಧಾನಿ ನರೇಂದ್ರ ಮೋದಿ ಪ್ರಧಾನಿಯಾದರು. 10 ವರ್ಷ ಮೋದಿ ಭರವಸೆ ಖಾಲಿ ಚೆಂಬು ಆಗಿದೆ. ಯಡಿಯೂರಪ್ಪ ಹಾಗೂ ಈಶ್ವರಪ್ಪ ಗೆಲ್ಲಲು ಬಂಗಾರಪ್ಪ ಕಾರಣರಾಗಿದ್ದನ್ನು ಸಂಸದ ರಾಘವೇಂದ್ರ ಮರೆಯಬಾರದು. ತಾಲ್ಲೂಕಿಗೆ ನೀರಾವರಿ ಯೋಜನೆ ಅನುಷ್ಠಾನ ಮಾಡಿಸಿದ್ದು ನಾನು. ಸೊರಬ ತಾಲ್ಲೂಕಿನಲ್ಲಿ 6 ಸಾವಿರಕ್ಕೂ ಹೆಚ್ಚು ಹಕ್ಕು ಪತ್ರ ನೀಡಿದ್ದೇನೆ. ಆದರೆ ಅಧಿಕಾರದಲ್ಲಿದ್ದರೂ ಸಂಸದ ರಾಘವೇಂದ್ರ ಹಕ್ಕು ಪತ್ರ ನೀಡಿಲ್ಲ ಎಂದು ಟೀಕಿಸಿದರು.

‘ಕಾಂಗ್ರೆಸ್ ಗ್ಯಾರಂಟಿ ಯೋಜನೆ ಈ ಚುನಾವಣೆಗೆ ಸಹಕಾರಿಯಾಗಲಿದೆ. ಈ ಚುನಾವಣೆಯಲ್ಲಿ ಬಿಜೆಪಿ ಭ್ರಷ್ಟಾಚಾರದ ಹಣ ನಡೆಯುವುದಿಲ್ಲ. ನಿಮ್ಮ ಭ್ರಷ್ಟಾಚಾರವನ್ನು ಬೀದಿಗೆ ತರುತ್ತೇವೆ. ಶಿಕಾರಿಪುರ ತಾಲ್ಲೂಕಿನ ಜನತೆ ಗೀತಾ ಶಿವರಾಜಕುಮಾರ್ ಅವರಿಗೆ ಹೆಚ್ಚಿನ ಮತ ನೀಡುವ ಮೂಲಕ ಮಾಜಿ ಮುಖ್ಯಮಂತ್ರಿ ಬಂಗಾರಪ್ಪ ನೀಡಿದ ಅನ್ನದ ಋಣವನ್ನು ಬಡ್ಡಿ ಸಮೇತ ತೀರಿಸಲಿದ್ದಾರೆ. ಮುಖಂಡರು ಹಾಗೂ ಕಾರ್ಯಕರ್ತರಿಗೆ ನಮ್ಮ ಬೂತ್ ನಮ್ಮ ಜವಾಬ್ದಾರಿಯಾಗಬೇಕು. ಕಚೇರಿಯಲ್ಲಿ ಸಮಯ ಕಳೆಯದೇ ನಿಮ್ಮ ಬೂತ್‌ಗಳನ್ನು ಗಟ್ಟಿಗೊಳಿಸಬೇಕು’ ಎಂದು ಕರೆ ನೀಡಿದರು.

ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಆರ್. ಪ್ರಸನ್ನಕುಮಾರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಪಿ. ನಾಗರಾಜಗೌಡ್ರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಾರಿವಾಳ ಶಿವರಾಮ್, ಶಿರಾಳಕೊಪ್ಪ ಘಟಕದ ಅಧ್ಯಕ್ಷ ವೀರನಗೌಡ, ಮುಖಂಡರಾದ ಕಲಗೋಡು ರತ್ನಾಕರ, ನಗರದ ಮಹಾದೇವಪ್ಪ, ಚುರ್ಚಿಗುಂಡಿ ಫಾಲಾಕ್ಷಪ್ಪ, ಎಚ್.ಎಸ್. ರವೀಂದ್ರ, ಶಿವ್ಯಾನಾಯ್ಕ, ಉಮೇಶ್ ಮಾರವಳ್ಳಿ, ಉಳ್ಳಿದರ್ಶನ್, ಭಂಡಾರಿ ಮಾಲತೇಶ್, ರೋಷನ್, ಬಡಗಿ ಫಾಲಾಕ್ಷಪ್ಪ, ರಾಘವೇಂದ್ರನಾಯ್ಕ, ಖಾಸೀಂಸಾಬ್, ಕೃಷ್ಣೋಜಿರಾವ್, ಹುಲ್ಮಾರ್ ಶಿವು, ಮಂಜ್ಯಾನಾಯ್ಕ, ನಾಗರಾಜನಾಯ್ಕ ಉಪಸ್ಥಿತರಿದ್ದರು

# ಸಿಗಂದೂರು ಲಾಂಚ್ ಸ್ಥಗಿತ ಸಾರ್ವಜನಿಕರಿಗೆ ತೀವ್ರ ತೊಂದರೆ

ಸುದ್ದಿ ಸಂಚಾರಿ | ತುಮರಿ

ಹೊಳೆಬಾಗಿಲು (ತುಮರಿ): ಸಿಗಂದೂರು ಕ್ಷೇತ್ರ ಸೇರಿದಂತೆ ಶರಾವತಿ ಕಣಿವೆ ಸುತ್ತಲಿನ ಅರಣ್ಯದಂಚಿನ ಗ್ರಾಮಗಳಿಗೆ ಹೊರ ಜಗತ್ತಿನ ಸಂಪರ್ಕ ಕೊಂಡಿ ಆಗಿರುವ ‘ಲಾಂಚ್’ ಸೇವೆ ಪದೇ ಪದೇ ಸ್ಥಗಿತಗೊಳ್ಳುತ್ತಿದೆ. ಇದರಿಂದ ಜನರಿಗೆ ತೀವ್ರ ತೊಂದರೆ ಆಗಿದೆ.

ಸಿಗಂದೂರು ದೇವಸ್ಥಾನಕ್ಕೆ ಬರುವ ಪ್ರವಾಸಿಗರು ಸೇರಿದಂತೆ ತುಮರಿ, ಬ್ಯಾಕೋಡು, ಕಟ್ಟಿನಕಾರು ಭಾಗದ 30,000ಕ್ಕೂ ಅಧಿಕ ಜನರು ಶರಾವತಿ ಹಿನ್ನೀರು ದಾಟಲು ನಿತ್ಯ ಲಾಂಚ್ ಬಳಕೆ ಮಾಡುತ್ತಾರೆ. ಆದರೆ, ಅಗತ್ಯಕ್ಕೆ ತಕ್ಕಂತೆ ಲಾಂಚ್ ಸೇವೆ ಸಿಗುತ್ತಿಲ್ಲ.

ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಸಮರ್ಪಕ ಸೌಲಭ್ಯ ನೀಡುತ್ತಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸೇವೆ ನಿಲ್ಲಿಸಿದ ಎರಡು ಲಾಂಚ್: ಬೇಸಿಗೆ ರಜೆ ವೇಳೆ ಸಿಗಂದೂರು ಚೌಡೇಶ್ವರಿ ದೇವಸ್ಥಾನಕ್ಕೆ ನಿತ್ಯ ಸಾವಿರಾರು ಮಂದಿ ಬರುತ್ತಿದ್ದಾರೆ. ಆದರೆ, ಎರಡು ಲಾಂಚ್‌ಗಳು ತಾಂತ್ರಿಕ ದೋಷದಿಂದ ಏಕಾಏಕಿ ಸ್ಥಗಿತಗೊಂಡ ಪರಿಣಾಮ ಸ್ಥಳಿಯರು, ಚುನಾವಣೆ ಕಾರ್ಯಕ್ಕೆ ನಿಯುಕ್ತರಾಗಿರುವ ಸಿಬ್ಬಂದಿ, ಪೊಲೀಸ್ ವಾಹನಗಳು ತೊಂದರೆ ಅನುಭವಿಸುವಂತಾಗಿದೆ.

ಅಂಬಾರಗೋಡ್ಲು- ಕಳಸವಳ್ಳಿ ಕಡವಿನಲ್ಲಿ ಒಟ್ಟು 4 ಲಾಂಚ್‌ಗಳು ಕಾರ್ಯ ನಿರ್ವಹಿಸುತ್ತಿದ್ದು, ಸಿಗಂದೂರು ಸೇತುವೆ ನಿರ್ಮಾಣ ಕಂಪನಿಗೆ ಒಂದು ಲಾಂಚ್ ನೀಡಲಾಗಿದೆ. ಉಳಿದ 3 ಲಾಂಚ್‌ಗಳ ಪೈಕಿ ಒಂದು ತಾಂತ್ರಿಕ ದೋಷದಿಂದ ಏಪ್ರಿಲ್ 13ರಂದೇ ಸಂಚಾರ ಸ್ಥಗಿತಗೊಳಿಸಿದೆ. ವಾರ ಕಳೆದರೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ದುರಸ್ತಿಗೆ ಕ್ರಮ ಕೈಗೊಂಡಿಲ್ಲ. ಇನ್ನುಳಿದ ಎರಡು ಲಾಂಚ್‌ಗಳ ಕಾರ್ಯಭಾರ ಹೆಚ್ಚಿದೆ. ಈ ಪೈಕಿ ಮತ್ತೊಂದು ಲಾಂಚ್‌ನಲ್ಲಿ ಭಾನುವಾರ ತಾಂತ್ರಿಕ ದೋಷ ಕಂಡುಬಂದು ಸ್ಥಗಿತಗೊಂಡಿದೆ.


ಸುರಕ್ಷತೆ ಇಲ್ಲದ ಲಾಂಚ್ ಸೇವೆ: ಲಾಂಚ್‌ಗಳಿಂದ ಜನರಿಗೆ ಸರಿಯಾಗಿ ಸೇವೆ ಸಿಗುತ್ತಿಲ್ಲ. 2020ರ ಸೆಪ್ಟೆಂಬರ್‌ನಲ್ಲಿ ಎರಡು ಲಾಂಚ್ ನಡುವೆ ಮುಖಾಮುಖಿ ಡಿಕ್ಕಿಯಾಗಿದ್ದವು. ಅದೃಷ್ಟವಶಾತ್ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದರು. ನಂತರವೂ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳುವ ನಿರೀಕ್ಷೆ ಸುಳ್ಳಾಗಿದೆ.

‘ಹಿರಿಯ ಅಧಿಕಾರಿಗಳ ಒತ್ತಡಕ್ಕೆ ಮಣಿದು, ಉಳಿದಿರುವ ಒಂದೇ ಲಾಂಚ್‌ನಲ್ಲಿ ಭಾನುವಾರ ನಿಯಮ ಮೀರಿ ಸೇವೆ ನೀಡಲಾಗುತ್ತಿದೆ. ಮುಂಜಾಗ್ರತಾ ಕ್ರಮ ಇಲ್ಲದೇ ಜನ ರನ್ನು ತುಂಬಿಸುವುದರಿಂದ ನಮಗೆ ಸುರಕ್ಷತೆಯ ಚಿಂತೆ ಎದುರಾಗಿದೆ’ ಎಂದು ಪ್ರವಾಸಿಗ ನಾಗರಾಜ್ ಪಾವಗಡ ಆತಂಕ ವ್ಯಕ್ತಪಡಿಸಿದರು.

**ಲಾಂಚ್**



ಅಂಬಾರಗೋಡ್ಲು ತಟದಲ್ಲಿ ತಾಂತ್ರಿಕ ದೋಷದಿಂದ ಕೆಟ್ಟು ನಿಂತಿರುವ ಲಾಂಚ್




# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ


**ಮಧು ವಾಗ್ದಾಳಿ**

ಸಿನಿಮಾದವರು ಮುಖಕ್ಕೆ ಬಣ್ಣಹಚ್ಚಿದರೆ ಈಶ್ವರಪ್ಪ ನಾಲಿಗೆಗೆ ಬಣ್ಣ ಹಚ್ಚಿಕೊಳ್ಳುತ್ತಾರೆ


ಸೋಮವಾರ,22ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-61 | ● ಉಚಿತ | ● | ● www.suddisanchaari.in




Top News **ಸೊರಬ**

## ನೇಹಾ ಕೊಲೆ ಪ್ರಕರಣವನ್ನು ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ

ಸುದ್ದಿ ಸಂಚಾರಿ

ಸೊರಬ: ಹುಬ್ಬಳ್ಳಿ-ಧಾರವಾಡ ಪಾಲಿಕೆಯ ಕಾಂಗ್ರೆಸ್ ಸದಸ್ಯನಿರಂಜನ ಹಿರೇಮಠ ಪುತ್ರಿ ನೇಹಾ ಕೊಲೆ ಪ್ರಕರಣವನ್ನು ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಪಟ್ಟಣದ ರೈತ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ತಾಲೂಕು ಮಹಿಳಾ ಮೋರ್ಚಾ ಅಧ್ಯಕ್ಷೆ ಹೊಳೆಯಮ್ಮ ಚನ್ನಪಟ್ಟಣ ಪ್ರತಿಕ್ರಿಯಿಸಿದ್ದು, ರಾಜ್ಯ ಕಾಂಗ್ರೆಸ್ ಸರ್ಕಾರದ ಗೃಹಲಕ್ಷ್ಮೀ ಬೇಡ ಮನೆಯ ಮಹಾಲಕ್ಷ್ಮಿ ಉಳಿಸಿ ಹುಬ್ಬಳ್ಳಿಯಲ್ಲಿ ನಡೆದ ಯುವತಿಯ ಕೊಲೆ ಪ್ರಕರಣ ಇಡಿ ರಾಜ್ಯವೇ ಬೆಚ್ಚಿ ಬೀಳಿಸಿದೆ. ಕಾಂಗ್ರೆಸ್ ಸರ್ಕಾರದ ಓಲೈಕೆ ರಾಜಕಾರಣ, ತುಷ್ಟಿಕರಣ ನೀತಿಯಿಂದಾಗಿ ಒಂದು ಸಮುದಾಯದ ಮದೋನ್ಮತ್ತರು ಕಾಯಿದೆಯ ಭಯವಿಲ್ಲದೇ ಕೊಲೆ, ದೊಂಬಿ, ನೈತಿಕ ಪೊಲೀಸ್ ಗಿರಿ, ದೇಶ ವಿರೋಧಿ ಘೋಷಣೆ ಹೇಳಬೇಕೆಂಬ ಸಾರ್ವಜನಿಕ ಆಗ್ರಹ ನಡೆಸುತ್ತಿದ್ದಾರೆ. ಇದಕ್ಕೆ ಸಿದ್ದರಾಮಯ್ಯ ಸರ್ಕಾರವೇ ನೇರ ಹೊಣೆ ಈ ಕೂಡಲೆ ಗೃಹ ಸಚಿವರು ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು,

ತಾಲೂಕು ಬಿಜೆಪಿ ಮಂಡಲ ಅಧ್ಯಕ್ಷ ಪ್ರಕಾಶ್ ತಲಕಾಲಕೊಪ್ಪ ಮಾತನಾಡಿ ಹುಬ್ಬಳ್ಳಿಯಲ್ಲಿ ನಡೆದ ಈ ಬರ್ಭರ ಹತ್ಯೆಯನ್ನು ಪ್ರೇಮ ಪ್ರಕರಣದ ಹಿನ್ನೆಲೆಯಲ್ಲಿ ನಡೆದ ಕೊಲೆ ಎಂದು ಸಾಮಾನ್ನೀಕರಿಸುವುದು ಸರಿಯಲ್ಲ. ಇದರ ಹಿಂದೆ ಇರುವುದು ಈ ದೇಶದ ಕಾನೂನನ್ನು ಧಿಕ್ಕರಿಸುವ ಮಾನಸಿಕತೆ ಅಡಗಿದೆ. ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಮಾಡಿದವರನ್ನು ಸಮರ್ಥಿಸುವ ಮನಃಸ್ಥಿತಿ, ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಇಡುವ ವಿಧ್ವಂಸಕ ಮನಃಸ್ಥಿತಿ ರಾಮನವಮಿಯ ದಿನ ಜೈಶ್ರೀರಾಮ್ ಎಂದವರ ಮೇಲೆ ಹಲ್ಲೆ ಮಾಡುವ ಮನಃಸ್ಥಿತಿ. ಈಗ ಹುಬ್ಬಳ್ಳಿಯಲ್ಲಿ ಹಾಡಹಗಲೇ ಹಿಂದೂ ಯುವತಿಯನ್ನು ಬರ್ಬರವಾಗಿ ಹತ್ಯೆ ಮಾಡುವ ತಾಲಿಬಾನಿ ಮನಃಸ್ಥಿತಿ ಎಲ್ಲವೂ ಒಂದೆ. ಇದರ ಹಿಂದಿರುವ ಧೈರ್ಯ ಯಾವುದು ಗೊತ್ತೇ? ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ. ಸಿದ್ದರಾಮಯ್ಯನವರೇ ಇದೇನಾ ನೀವು ಕಂಡ ಕನಸಿನ ಸರ್ವಜನಾಂಗದ ಶಾಂತಿಯ ತೋಟ? ಎಂದು ಪ್ರಶ್ನಿಸಿದರು.

ತಾಲೂಕು ಬಿಜೆಪಿ ಯುವ ಮೋರ್ಚಾ ಘಟಕದ ಅಧ್ಯಕ್ಷ ರಾಜು ಮಾವಿನಬಳ್ಳಿಕೊಪ್ಪ ಮಾತನಾಡಿ ಹಿಂದೂ ಕಾರ್ಯಕರ್ತರ ಮೇಲೆ ಮಹಿಳೆಯರ ಮೇಲೆ ದೌರ್ಜನ್ಯ ನಡೆಯುತ್ತಿದೆ ಇದನ್ನು ತಡೆಯುವಲ್ಲಿ ರಾಜ್ಯ ಸರ್ಕಾರ ಸಂಪೂರ�


**ಆಧಾರ್ ಕಾರ್ಡ ತಿದ್ದುಪಡಿ ಮಾಡಲಾಗುವುದು**

1. ಮೊಬೈಲ್ ನಂಬರ್.
2. ವಿಳಾಸ ಬದಲಾವಣೆ
3. ತಂದೆ/ಪತಿಯ ಹೆಸರು ತಿದ್ದುಪಡಿ ಮಾಡಲಾಗುವುದು

**ಬಸ್ ನಿಲ್ದಾಣ ಶಿರಾಳಕೊಪ್ಪ**





## ಒಂದೇ ಕುಟುಂಬದ ಆರು ಜನ ಸಾವು

ದಾಂಡೇಲಿ (ಉತ್ತರ ಕನ್ನಡ ಜಿಲ್ಲೆ): ಕಾಳಿ ನದಿ ಹಿನ್ನೀರು ಪ್ರದೇಶವಾದ ಬೀರಂಪಾಲಿಯ ಅಕ್ವಾಡ ಗ್ರಾಮದ ಹತ್ತಿರ ನಾಲ್ವರು ಮಕ್ಕಳು ಸೇರಿದಂತೆ, ಒಂದೇ ಕುಟುಂಬದ ಆರು ಜನ ಪ್ರವಾಸಿ ಗರು ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಭಾನುವಾರ ಸಂಜೆ ಮೃತಪಟ್ಟಿದ್ದಾರೆ.

ಹುಬ್ಬಳ್ಳಿಯ ಈಶ್ವರ ನಗರದ ನಿವಾಸಿಗಳಾದ ನಜೀರ್ ಅಹ್ಮದ್ ಹೊಂಬಳ (40), ಅಲ್ಫೀಯಾ ಅಹ್ಮದ್ (10), ಮೋಹಿನ್ ಅಹ್ಮದ್ (6), ಬೆಂಗಳೂರಿನ ನಿವಾಸಿಗಳಾದ ರೇಷಾ ಉನ್ನಿಸಾ ತೋಸಿಫ್ ಅಹ್ಮದ್ (38), ಇಫ್ರಾ ತೋಸಿಫ್ ಅಹ್ಮದ್ (15), ಅಬೀದ್ ಅಹ್ಮದ್ (12) ಮೃತರು. ಪ್ರವಾಸಕ್ಕೆ ಬಂದಿದ್ದ ಎಂಟು ಮಂದಿಯಲ್ಲಿ ಇಬ್ಬರು ಅಪಾಯದಿಂದ ಪಾರಾಗಿದ್ದಾರೆ.

'ಹುಬ್ಬಳ್ಳಿಯಿಂದ ದಾಂಡೇಲಿಯ ಪ್ರವಾಸಕ್ಕೆ ಕುಟುಂಬ ಸಮೇತರಾಗಿ ಎಂಟು ಜನರು ಬಂದಿದ್ದು ನದಿ ನೀರಿನಲ್ಲಿ ಆಟ ಆಡುತ್ತಿದ್ದಾಗ ಆಳ ನೀರಿಗೆ ಕಾಲು ಜಾರಿದ ಮಕ್ಕಳನ್ನು ರಕ್ಷಿಸಲು ಮುಂದಾದರು. ಒಬ್ಬರ ನಂತರ ಒಬ್ಬರು ಮುಳುಗಿ ಮೃತಪಟ್ಟಿದ್ದಾರೆ' ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆ ಕುರಿತು ದಾಂಡೇಲಿ ಗ್ರಾಮೀಣ ಠಾಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.